**ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಯಾದಗಿರಿ.**

**ಎಸ್.ಸಿ. 37/2025**

1. ಗುರುಮಠಕಲ್ ಪೊಲೀಸಠಾಣೆ .....ಫಿರ್ಯಾದಿ

ವಿರುದ್ಧ

1. ಅನಂತರಡ್ಡಿ ಮತ್ತು ಇತರರು .....ಆರೋಪಿತರು

**ದೋಷಾರೋಪಣೆ**

ನಾನು **ಎ. ಈರಣ್ಣ ಎಮ್.ಕಾಂ. ಎಲ್.ಎಲ್.ಎಮ್** ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಯಾದಗಿರಿ,

ಆರೋಪಿತರಾದ

1. ಅನಂತರಡ್ಡಿ ತಂದೆ ಸಾಯಿರಡ್ಡಿ ಉಪ್ಪರಪಲ್ಲಿ, ವಯಸ್ಸುಃ 50 ವರ್ಷ, ಉದ್ಯೋಗಃ ಒಕ್ಕಲುತನ ಸಾಃ ಜಲಾಲಪೂರ ತಾಃ ಜಿಃ ನಾರಾಯಣಪೇಠ (ಟಿ.ಎಸ್)
2. ನಾರಾಯಣರಡ್ಡಿ ತಂದೆ ಸಾಯಿರಡ್ಡಿ ಉಪ್ಪರಪಲ್ಲಿ, ವಯಸ್ಸುಃ 45 ವರ್ಷ, ಉದ್ಯೋಗಃ ಒಕ್ಕಲುತನ ಸಾಃ ಜಲಾಲಪೂರ ತಾಃ ಜಿಃ ನಾರಾಯಣಪೇಠ (ಟಿ.ಎಸ್)
3. ಯಂಕಟೇಶ ತಂದೆ ಸಾಯಿರಡ್ಡಿ ಉಪ್ಪರಪಲ್ಲಿ, ವಯಸ್ಸುಃ 42 ವರ್ಷ, ಉದ್ಯೋಗಃ ಒಕ್ಕಲುತನ ಸಾಃ ಜಲಾಲಪೂರ ತಾಃ ಜಿಃ ನಾರಾಯಣಪೇಠ (ಟಿ.ಎಸ್)
4. ರಘು ತಂದೆ ಅನಂತರಡ್ಡಿ ಉಪ್ಪರಪಲ್ಲಿ, ವಯಸ್ಸುಃ 35 ವರ್ಷ, ಉದ್ಯೋಗಃ ಒಕ್ಕಲುತನ ಸಾಃ ಜಲಾಲಪೂರ ತಾಃ ಜಿಃ ನಾರಾಯಣಪೇಠ (ಟಿ.ಎಸ್)

5 ಅರವಿಂದ ತಂದೆ ಅನಂತರಡ್ಡಿ ಉಪ್ಪರಪಲ್ಲಿ, ವಯಸ್ಸುಃ 30 ವರ್ಷ, ಉದ್ಯೋಗಃ ಒಕ್ಕಲುತನ ಸಾಃ ಜಲಾಲಪೂರ ತಾಃ ಜಿಃ ನಾರಾಯಣಪೇಠ (ಟಿ.ಎಸ್)

ನಿಮ್ಮನ್ನು ಈ ಕೆಳಕಂಡಂತೆ ದೋಷಾರೋಪಣೆಗೆ ಗುರಿಪಡಿಸುತ್ತೇನೆ.

ಗುರುಮಠಕಲ್ ಪೊಲೀಸ ಠಾಣಾ ವ್ಯಾಪ್ತಿಯ ಅನಾಪೂರ ಸೀಮಾಂತರದಲ್ಲಿ ಬರುವ ಸರ್ವೆ ನಂಬರ 443 ರಲ್ಲಿ ಚಾಸಾ-1 ಇವರು ದಿಃ 03.06.2019 ರಂದು ಬೆಳಿಗ್ಗೆ 10.00 ಗಂಟೆ ಸುಮಾರು ತೋಗರಿ ಕೌಲಿಗಳನ್ನು ಆಯುತ್ತ ಒಂದು ಕಡಗೆ ಕೂಡಿ ಹಾಕುತ್ತಿದ್ದಾಗ ಆರೋಪಿತರಾದ ನೀವುಗಳು ಹಲ್ಲೆ ಮಾಡುವ ಉದ್ದೇಶದಿಂದ ನೀವುಗಳೆಲ್ಲರು ಅಕ್ರಮಕೂಟ ರಚಿಸಿಕೊಂಡು ಸೇರಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆ ಕಲಂ. 143 ಸಹವಾಚಕ 149 ರಡಿಯಲ್ಲಿ ದಂಡನೀಯ ಅಪರಾಧಗಳನ್ನು ಈ ನ್ಯಾಯಾಲಯದ ಸಂಜ್ಞೇಯತೆಯ ಪರಿಧಿಯಲ್ಲಿ ಎಸಗಿರುವಿರಿ.

2. ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ ನೀವುಗಳು ದೊಂಬಿ ಮಾಡುವ ಉದ್ದೇಶದಿಂದ ಸದರಿ ಜಮೀನಿನ ಸ್ಥಳದಲ್ಲಿ ಸೇರಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆ ಕಲಂ. 147 ಸಹವಾಚಕ 149 ರಡಿಯಲ್ಲಿ ದಂಡನೀಯ ಅಪರಾಧಗಳನ್ನು ಈ ನ್ಯಾಯಾಲಯದ ಸಂಜ್ಞೇಯತೆಯ ಪರಿಧಿಯಲ್ಲಿ ಎಸಗಿರುವಿರಿ.

3. ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ ನೀವುಗಳು ಚಾಸಾ-1 ರವರ ಜಮೀನಿನಲ್ಲಿ ಅತಿಕ್ರಮ ಪ್ರವೇಶ ಮಾಡಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆ ಕಲಂ. 447 ಸಹವಾಚಕ 149 ರಡಿಯಲ್ಲಿ ದಂಡನೀಯ ಅಪರಾಧಗಳನ್ನು ಈ ನ್ಯಾಯಾಲಯದ ಸಂಜ್ಞೇಯತೆಯ ಪರಿಧಿಯಲ್ಲಿ ಎಸಗಿರುವಿರಿ.

4. ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ ನೀವುಗಳು ಚಾಸಾ-1 ರವರರಿಗೆ 1 ನೇ ಆರೋಪಿ ಕೌಲಿಗಳನ್ನು ಯಾಕೆ ತೆಗೆಯುತ್ತೀಯಾ ಅಂತಾ ಕೆಳಿದ್ದು, 2 ನೇ ಆರೋಪಿ ಈ ಸೂಳೆದ ಏನ್  ಕೇಳತಿರಿ ಅಂತಾ ಅವಾಚ್ಯ ಶಬ್ದಗಳಿಂದ ಬೈದಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆ ಕಲಂ. 504 ಸಹವಾಚಕ 149 ರಡಿಯಲ್ಲಿ ದಂಡನೀಯ ಅಪರಾಧಗಳನ್ನು ಈ ನ್ಯಾಯಾಲಯದ ಸಂಜ್ಞೇಯತೆಯ ಪರಿಧಿಯಲ್ಲಿ ಎಸಗಿರುವಿರಿ.

5. ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ ನೀವುಗಳು ಚಾಸಾ-1 ರವರಿಗೆ ಕೈಯಿಂದ ನೂಕಿ ಕೊಟ್ಟು, ಕೈಹಿಡಿದು ಎಳೆದಾಡಿ ಹೊಡೆಬಡೆ ಮಾಡಿದ್ದು, ಆ ಮೂಲಕ ನೀವು

ಭಾರತೀಯ ದಂಡ ಸಂಹಿತೆ ಕಲಂ. 323 ಸಹವಾಚಕ 149 ರಡಿಯಲ್ಲಿ ದಂಡನೀಯ ಅಪರಾಧಗಳನ್ನು ಈ ನ್ಯಾಯಾಲಯದ ಸಂಜ್ಞೇಯತೆಯ ಪರಿಧಿಯಲ್ಲಿ ಎಸಗಿರುವಿರಿ.

6. ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ ನೀವುಗಳು ಚಾಸಾ-1 ರವರಿಗೆ ನಾವು ಹೊಲ ಅಸ್ಸ ಮಾಡಮ್ ಅಂತಾ ಅವಚ್ಯಾವಾಗಿ ಬೈದು, ಆರೋಪಿ 3 ರಿಂದ 5 ರವರು ಚಾಸಾ-1 ರವರ ಮಾನಭಂಗ ಉಂಟು ಮಾಡುವ ಉದ್ದೇಶದಿಂದ ಆಕೆಯ ಕೈಹಿಡಿದು ಎಳೆದಾಡಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆ ಕಲಂ. 354 ಸಹವಾಚಕ 149 ರಡಿಯಲ್ಲಿ ದಂಡನೀಯ ಅಪರಾಧಗಳನ್ನು ಈ ನ್ಯಾಯಾಲಯದ ಸಂಜ್ಞೇಯತೆಯ ಪರಿಧಿಯಲ್ಲಿ ಎಸಗಿರುವಿರಿ.

7. ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ ನೀವುಗಳು ಚಾಸಾ-1 ರವರ ಅಲ್ಲಿಂದ ಹೋಗುವಾಗ ಇನ್ನೊಮ್ಮೆ ಸಿಕ್ಕರೆ ನಿನಗೆ ಜೀವಂತ ಬಿಡುವುದಿಲ್ಲ ಅಂತಾ ಜೀವದ ಬೆದರಿಕೆ ಹಾಕಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆ ಕಲಂ. 506 ಸಹವಾಚಕ 149 ರಡಿಯಲ್ಲಿ ದಂಡನೀಯ ಅಪರಾಧಗಳನ್ನು ಈ ನ್ಯಾಯಾಲಯದ ಸಂಜ್ಞೇಯತೆಯ ಪರಿಧಿಯಲ್ಲಿ ಎಸಗಿರುವಿರಿ.

ಈ ಮೇಲೆ ಹೇಳಿರುವ ಆಪಾದನೆಗಳಿಗೆ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆ ಎದುರಿಸಬೇಕೆಂದು ಇಂದು ದಿನಾಂಕಃ **24.10.2025** ರಂದು ಆದೇಶಿಸಿದ್ದೇನೆ.

ಸ್ಥಳಃ- ಯಾದಗಿರಿ

ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಯಾದಗಿರಿ.